**ಇರಾನ್ ಅಧ್ಯಕ್ಷರೊಂದಿಗೆ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಮಾತುಕತೆ**

ಮಾರ್ಚ್ 12, 2026

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್ ಅಧ್ಯಕ್ಷ ಡಾ. ಮಸೂದ್ ಪೆಜೆಶ್ಕಿಯನ್ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು.

2. ಅಧ್ಯಕ್ಷ ಪೆಜೆಶ್ಕಿಯನ್ ಇರಾನ್‌ನ ಪ್ರಸ್ತುತ ಪರಿಸ್ಥಿತಿಯ ಬಗ್ಗೆ ಪ್ರಧಾನಮಂತ್ರಿಗೆ ವಿವರಿಸಿದರು ಮತ್ತು ಪ್ರದೇಶದ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ತಮ್ಮ ದೃಷ್ಟಿಕೋನವನ್ನು ಹಂಚಿಕೊಂಡರು.

3. ಈ ಪ್ರದೇಶದಲ್ಲಿ ಭುಗಿಲೇಳುತ್ತಿರುವ ಭದ್ರತಾ ಪರಿಸ್ಥಿತಿಯ ಬಗ್ಗೆ ಪ್ರಧಾನಿ ಆಳವಾದ ಕಾಳಜಿಯನ್ನು ವ್ಯಕ್ತಪಡಿಸಿದರು ಹಾಗೂ ಮಾತುಕತೆ ಮತ್ತು ರಾಜತಾಂತ್ರಿಕತೆಯ ಮೂಲಕ ಎಲ್ಲಾ ಸಮಸ್ಯೆಗಳನ್ನು ಪರಿಹರಿಸಬೇಕು ಎಂಬ ಭಾರತದ ಸ್ಥಿರ ನಿಲುವನ್ನು ಪುನರುಚ್ಚರಿಸಿದರು.

4. ಇರಾನ್ ಸೇರಿದಂತೆ ಈ ಪ್ರದೇಶದ ಸುತ್ತಮುತ್ತ ಇರುವ ಭಾರತೀಯ ಪ್ರಜೆಗಳ ಸುರಕ್ಷತೆ ಮತ್ತು ಯೋಗಕ್ಷೇಮದ ಬಗ್ಗೆ ಭಾರತದ ಆದ್ಯತೆಯನ್ನು ಪ್ರಧಾನಮಂತ್ರಿ ಒತ್ತಿ ಹೇಳಿದರು, ಜೊತೆಗೆ ಇಂಧನ ಮತ್ತು ಸರಕುಗಳ ತಡೆರಹಿತ ಸಾಗಣೆಯ ಪ್ರಾಮುಖ್ಯತೆಯನ್ನು ಕೂಡ ಪ್ರಧಾನಮಂತ್ರಿ ಹೇಳಿದರು.

5. ಉಭಯ ನಾಯಕರು ಸಂಪರ್ಕದಲ್ಲಿರಲು ಒಪ್ಪಿಕೊಂಡರು.

**ನವದೆಹಲಿ**

**ಮಾರ್ಚ್ 12, 2026**